# **ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.,ರವರ ನ್ಯಾಯಾಲಯ, ಶೃಂಗೇರಿ**

**ಸಿ.ಸಿ.ನಂಃ 12/2026**

**ಫಿರ್ಯಾದುದಾರರುಃ** ಸರ್ಕಾರದ ಪರವಾಗಿ ಶೃಂಗೇರಿ ಪೊಲೀಸರು

-: **ವಿರುದ್ಧ** :-

**ಆರೋಪಿಃ** ಶುಭ ಚಂದನ,
ಬಿನ್ ಚಂದ್ರಶೇಖರ್,
ವಯಸ್ಸು ಸುಮಾರು 31 ವರ್ಷ,
ವಾಸಃ ರಾಜಾನಗರ,
ಶೃಂಗೇರಿ ತಾಲ್ಲೂಕು.

## **ದೋಷಾರೋಪಣೆ**

ಶ್ರೀ. ಜೀತು ಆರ್.ಎಸ್., ಬಿ.ಎ.ಎಲ್., ಎಲ್‌ಎಲ್.ಎಂ., ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ., ಶೃಂಗೇರಿ ಆದ ನಾನು ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

ದಿನಾಂಕಃ 12.11.2025 ರಂದು ಸಂಜೆ 5.45 ಗಂಟೆಗೆ ಶೃಂಗೇರಿ ಪೋಲೀಸ್ ಠಾಣಾ ಸರಹದ್ದಿನ ಶೃಂಗೇರಿ ತಾಲ್ಲೂಕು ಎನ್.ಹೆಚ್. ರಸ್ತೆ 169ರ ಗೌತಮ್ ಹೋಂ ಸ್ಟೇ ಮುಂಭಾಗದ ತಿರುವಿನಲ್ಲಿ ಆರೋಪಿಯಾದ ನೀವು ಚಾಸಾ-14 ರವರ ವಾಹನ ಸಂಖ್ಯೆ KA-18-MA-1406 ಮಾರುತಿ ಸುಜುಕಿ ವ್ಯಾಗನ್ ಕಾರನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಹೋಗಿ ಚಾಸಾ-1 ರವರು ಚಾಲನೆ ಮಾಡುತ್ತಿದ್ದ KA-18-EN-1123 ನಂಬರಿನ ಸುಜುಕಿ ಎಕ್ಸೆಸ್ ಸ್ಕೂಟಿಗೆ ಹಿಂಭಾಗದಿಂದ ಡಿಕ್ಕಿ ಹೊಡೆದಿರುತ್ತೀರಿ. ಈ ರೀತ್ಯ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ 281 ರಂತೆ ದಂಡಿಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಎರಡನೆಯದಾಗಿ, ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ ಆರೋಪಿಯಾದ ನೀವು ಅಪಘಾತ ಉಂಟು ಮಾಡಿದ ಪರಿಣಾಮ ಚಾಸಾ-1 ರವರಿಗೆ ಎಡಗೈ, ಬಲಗಾಲಿನ ಪಾದ, ಎಡಕಾಲಿನ ಮೊಣಕಾಲಿಗೆ ಮತ್ತು ಬಲ ಮೊಣಕೈಗೆ ಗಾಯವಾಗಿರುತ್ತದೆ. ಈ ರೀತ್ಯ ಆರೋಪಿಯಾದ

ನೀವು ಭಾರತೀಯ ನ್ಯಾಯ ಸಂಹಿತೆ ಕಲಂ 125(a) ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಮೂರನೆಯದಾಗಿ, ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ ಆರೋಪಿಯಾದ ನೀವು ವಾಹನ ಸಂಖ್ಯೆ KA-18-MA-1406 ಮಾರುತಿ ಸುಜುಕಿ ವ್ಯಾಗನ್ ಕಾರಿನಿಂದ KA-18-EN-1123 ನಂಬರಿನ ಸುಜುಕಿ ಎಕ್ಸೆಸ್ ಸ್ಕೂಟಿಗೆ ಹಿಂಭಾಗದಿಂದ ಡಿಕ್ಕಿ ಹೊಡೆದ ಪರಿಣಾಮ ಸ್ಕೂಟಿಯ ಹಿಂಬದಿಯಲ್ಲಿ ಕುಳಿತಿದ್ದ ವಿಜಯಲಕ್ಷ್ಮಿ ಅವರು ಡಿವೈಡರ್ ಮೇಲೆ ಬಿದ್ದು ತಲೆಗೆ ಪೆಟ್ಟಾಗಿರುತ್ತದೆ ಹಾಗೂ ಕಾರು ವಿಜಯಲಕ್ಷ್ಮಿ ಅವರ ತಲೆಯ ಮೇಲೆ ಹರಿದು ಮರಣ ಹೊಂದಿರುತ್ತದೆ. ಈ ರೀತ್ಯ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ 106(1) ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಸದರಿ ಮೇಲ್ಕಂಡ ಆರೋಪಿಯಾದ ನೀವು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮೇಲೆ ಹೇಳಿದ ಅಪರಾದಗಳನ್ನು ಮಾಡಿದ್ದರಿಂದ, ಅವುಗಳು ಈ ನ್ಯಾಯಾಲಯದಿಂದ ವಿಚಾರಣೆ ಆಗತಕ್ಕದ್ದೆಂದು ಆದೇಶಿಸಲಾಗಿದೆ.

**ಪ್ರಶ್ನೆ-1** : ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದಿರಾ? ಅವುಗಳು ನಿಮಗೆ ಅರ್ಥವಾಯಿತೇ?

**ಉತ್ತರ** : ಅರ್ಥವಾಯಿತು

**ಪ್ರಶ್ನೆ-2** : ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

**ಉತ್ತರಃ** : ವಿಚಾರಣೆಯಾಗಬೇಕು.

(ಈ ಮೇಲ್ಕಂಡ ದೋಷಾರೋಪಣೆಯನ್ನು ನಾನೇ ಸ್ವತಃ ಆರೋಪಿಗೆ ಓದಿ ಹೇಳಿ, ಅವರು ಕೊಟ್ಟ ಉತ್ತರವನ್ನು ಬರೆದುಕೊಂಡಿದ್ದು, ಮೇಲೆ ಹೇಳಿರುವುದು ಸತ್ಯ ಹಾಗೂ ಸರಿಯಾಗಿದೆ ಎಂದು ದೃಢೀಕರಿಸುತ್ತೇನೆ.)

**ದಿನಾಂಕಃ** **ಸಹಿ/- 12.03.2026.**

**(ಜೀತು ಆರ್.ಎಸ್.)**
**ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.,**
**ಶೃಂಗೇರಿ.**

**ಆರೋಪಿಯ ಸಹಿಃ**